# ಕರ್ನಾಟಕ  ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 858 (929)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ  ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ವಿಷಯ : ನೇಕಾರರಿಗೆ ಅನುಕೂಲತೆಗಳು

(ಅ) ಕೈಮಗ್ಗ ಅಭಿವೃದ್ಧಿ ನಿಗಮ ನೇಕಾರರಿಗೆ ಸರ್ಕಾರ ಯಾವ ರೀತಿಯಿಂದ ನೆರವಾಗುತ್ತಿದೆ; (ವಿವರ ಒದಗಿಸುವುದು)

(ಆ) ನಿಗಮ ಮಾರಾಟ ಮಳಿಗೆಗಳ ಸಂಖ್ಯೆ ಎಷ್ಟು; ನಿಗಮ ಲಾಭದಲ್ಲಿ ಇದೆಯೇ ಅಥವಾ ನಷ್ಟದಲ್ಲಿ ಇದೆಯೇ; ನಿಗಮವನ್ನು ಆಧುನೀಕರಣಗೊಳಿಸಿ ಕೈಮಗ್ಗದ ಬಟ್ಟೆಗಳ ಮಾರುಕಟ್ಟೆಯನ್ನು ವಿಸ್ತರಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಇ) ಕರ್ನಾಟಕ ರಾಜ್ಯ ನೇಕಾರರ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ನೇಕಾರಿಕೆಯನ್ನು ಅವಲಂಬಿಸಿರುವ ಸುಮಾರು 28 ಒಳಪಂಗಡಗಳನ್ನು ಸೇರಿಸಿಕೊಂಡಂತೆ ನೇಕಾರ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಿ ನೇಕಾರರ ಅಭಿವೃದ್ಧಿ, ವೃತ್ತಿ ಮತ್ತು ಆರ್ಥಿಕ ಅಭಿವೃದ್ಧಿಗೆ ನಿಗಮದ ಮೂಲಕ ನೆರವು ಒದಗಿಸಲು ಸರ್ಕಾರ ಕ್ರಮ ತೆಗೆದುಕೊಳ್ಳಲಾಗುವುದೇ?